## ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಗದಗ ಸಂಸ್ಥೆಯಲ್ಲಿ 2022 ನೇ ಸಾಲಿನಲ್ಲಿ ಪ್ರವೇಶಾತಿ ಪಡೆದ 150 ಎಂಬಿಬಿಎಸ್ ಪದವಿ ವಿದ್ಯಾರ್ಥಿಗಳ ವೈಟ್ ಕೋಟ್ ಸೆರಮನಿ ಸಮಾರಂಭ








ದಿನಾಂಕ : 13-12-2022 ರಂದು ಸಂಸ್ಥೆಯಲ್ಲಿ 2022 ನೇ ಸಾಲಿನಲ್ಲಿ ಪ್ರವೇಶಾತಿ ಪಡೆದ 150 ಎಂಬಿಬಿಎಸ್ ಪದವಿ ವಿದ್ಯಾರ್ಥಿಗಳಿಗೆ ವೈಟ್ ಕೋಟ್ ಸೆರಮನಿ ಸಮಾರಂಭಕ್ಕೆ ಆರತಿ ಬೆಳಗುವ ಮೂಲಕ ಸ್ವಾಗತಿಸಲಾಯಿತು. ಈ ಸಮಾರಂಭಕ್ಕೆ ಉದ್ಘಾಟಕರಾಗಿ ಡಾ. ಸಿ ಸೊಲೊಮನ್ ಖ್ಯಾತ ವೈದ್ಯರು ಗದಗ ಹಾಗೂ ಮುಖ್ಯ ಅಥಿತಿಗಳಾಗಿ ಡಾ. ಕುಶಾಲ್ ಗೋಡಖಿಂಡಿ ಖ್ಯಾತ ವೈದ್ಯರು ಗದಗ ಇವರು ಸಭೆಗೆ ಹಾಜರಾಗಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಸಮಾಜಮುಖಿಯಾಗಿ ಬಡವ - ಶ್ರೀಮಂತ ಬೇದವಿಲ್ಲದೇ ಪ್ರತಿ ರೋಗಿಯನ್ನು ಸಮಾನಾಂತರವಾಗಿ ಜಾತಿ ಮತ ಬೇದವಿಲ್ಲದೇ ಶುಶ್ರೂಷೆ ಮಾಡಬೇಕು. ವೈದ್ಯವೃತ್ತಿಗೆ ಸಮಾಜದಲ್ಲಿ ಉನ್ನತ ಮಟ್ಟದ ಸ್ಥಾನವಿದೆ ಅದನ್ನು ಕಾಯ್ದು ಕೊಳ್ಳುವುದು ತಮ್ಮ ಕರ್ತವ್ಯವಾಗಿದೆ. ವೈದ್ಯ ವೃತ್ತಿಯಲ್ಲಿ ಸತತ ಪರಿಶ್ರಮ, ಕಲಿಕೆ ಹಾಗೂ ಗುಣಮಟ್ಟದ ಸೇವೆ ನೀಡಲು ತಮ್ಮನ್ನು ತಾವು ತೋಡಗಿಸಿಕೊಳ್ಳಲು ಸೂಚಿಸಿದರು. ಹಾಗೂ ಸಂಸ್ಥೆಯ ನಿರ್ದೇಶಕರಾದ ಡಾ. ಬಸವರಾಜ ಬೊಮ್ಮನಹಳ್ಳಿ ಇವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ವೈದ್ಯರು ಪ್ರತಿಯೊಬ್ಬರ ಬದುಕಿನಲ್ಲಿ ಒಂದಲ್ಲಾ ಒಂದು ಹಂತದಲ್ಲಿ ದೇವರ ಸ್ವರೂಪಿಯಾಗಿ ಕಾಣಿಸುತ್ತಾರೆ. ತಮ್ಮ ಬದುಕಿನಲ್ಲಿ ಬರವಸೆ ತುಂಬುವ, ಸಂತೋಷಕ್ಕೆ ಕಾರಣರಾಗುವ ವೈದ್ಯರು ನಮಗೆ ದೇವರ ಸಮಾನರಾಗಿರುತ್ತಾರೆ ಎಂದು ತಿಳಿಸಿದರು. ಈ ಸಮಯದಲ್ಲಿ ಸಂಸ್ಥೆಯ ಪ್ರಾಂಶುಪಾಲರಾದ ಡಾ. ರಾಜು ಜಿ ಎಂ ಹಾಗೂ ವೈದ್ಯರು, ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳ ಪಾಲಕರು ಹಾಜರಿದ್ದರು